**ಕರ್ನಾಟಕ ಸರ್ಕಾರ**

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಅ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ: 15.03.2024.

## ಸುತ್ತೋಲೆ

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಹಾಗೂ ದಿನಾಂಕ:24.01.2022.
2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021(ಇ), ದಿ:24.01.2022.
3) ಸರ್ಕಾರದ ಆದೇಶ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:28.08.2023 ಹಾಗೂ ದಿನಾಂಕ:13.09.2023.
4) ಸರ್ಕಾರದ ಆದೇಶ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:13.09.2023.
5) ಈ ಕಛೇರಿಯ ಸಮಸಂಖ್ಯೆ ಪ್ರಕಟಣೆ ದಿನಾಂಕ:24.08.2023 ಹಾಗೂ ದಿನಾಂಕ:13.09.2023.
6) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:06.10.2023.
7) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:02.11.2023.
8) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:29.11.2023.
9) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:08.01.2024.
10) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:12.03.2024.

* * * * * * *

2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಾಲೇಜುಗಳಲ್ಲಿನ ಹೆಚ್ಚುವರಿ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಉಲ್ಲೇಖ-(10) ರಂತೆ 4 ನೇ ಸುತ್ತಿನ ಕೌನ್ಸಲಿಂಗ್ ಮೂಲಕ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲಾಗಿದ್ದು, ಅದರಂತೆ, ಅಭ್ಯರ್ಥಿಗಳು 4ನೇ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡ ಕಾಲೇಜುಗಳ ವಿಷಯವಾರು ಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. **ಆಯ್ಕೆಯಾದ ಅತಿಥಿ ಉಪನ್ಯಾಸಕರು ಆಯ್ಕೆಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ ಸಂಬಂಧಪಟ್ಟ ಕಾಲೇಜಿನಲ್ಲಿ ಕೂಡಲೇ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ.**

ಪ್ರಾಂಶುಪಾಲರು, ಉಲ್ಲೇಖ-(6) & (7) ರ ಈ ಕಛೇರಿಯ ಸುತ್ತೋಲೆಯಲ್ಲಿ ನೀಡಿರುವ ಸೂಚನೆಗಳಂತೆ 4 ನೇ ಸುತ್ತಿನ ಕೌನ್ಸಿಲಿಂಗ್ ಮೂಲಕ ಆಯ್ಕೆಯಾದ ಅತಿಥಿ ಉಪನ್ಯಾಸಕರ ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿ ಕೂಡಲೇ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವುದು, ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರನ್ನು 2023-24ನೇ ಶೈಕ್ಷಣಿಕ ಸಾಲಿನ ಸಂಬಂದಪಟ್ಟ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯನ್ವಯ ಲಭ್ಯವಾಗುವ ಉಳಿದ ಕಾರ್ಯಭಾರ/ಅವಧಿಗೆ ಮಾತ್ರ ಆಯ್ಕೆ ಮಾಡಿಕೊಳ್ಳಲಾಗಿರುತ್ತದೆ ಹಾಗೂ ಕರ್ತವ್ಯಕ್ಕೆ ಹಾಜರಾದ ಅತಿಥಿ ಉಪನ್ಯಾಸಕರ ಮಾಹಿತಿಯನ್ನು ಕಡ್ಡಾಯವಾಗಿ E.M.I.S. ನಲ್ಲಿ upload ಮಾಡುವುದು.

......2

ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು, ಸದರಿ ಕಾಲೇಜಿನಲ್ಲಿ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗಿಂತ ಕೊನೆಯವರಾಗಿರುತ್ತಾರೆ ಎಂಬ ಮಾಹಿತಿಯನ್ನು ಮತ್ತೊಮ್ಮೆ ತಿಳಿಸುತ್ತಾ, ನೀಡಿರುವ ಷರತ್ತುಗಳು ಮತ್ತು ಮಾರ್ಗಸೂಚಿಗಳನ್ನು ಹಾಗೂ ಸರ್ಕಾರ/ಇಲಾಖೆಯಿಂದ ಹೊರಡಿಸಲಾಗುವ ಸುತ್ತೋಲೆ/ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

**ಆಯುಕ್ತರು**
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**<u>ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;</u>**

1) ಸಂಬಂಧಪಟ್ಟ ಅಭ್ಯರ್ಥಿಗಳಿಗೆ;
2) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ;
3) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ;
4) ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
6) ಕಛೇರಿ ಪ್ರತಿ